# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**12.07.2024 / 18.40 hrs**

ಮುಖ್ಯಾಂಶಗಳು

**೧. ತಮಿಳುನಾಡಿಗೆ ನೀರು - ಕಾವೇರಿ ನಿಯಂತ್ರಣ ಸಮಿತಿ ಆದೇಶದ ವಿರುದ್ಧ ಕಾವೇರಿ ನಿರ್ವಹಣಾ ಪಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲು ಸರ್ಕಾರದ ನಿರ್ಧಾರ - ಇದೇ ಭಾನುವಾರ ಸರ್ವಪಕ್ಷ ಸಭೆ**

**೨. ಹೊರಜಿಲ್ಲೆ ರೋಗಿಗಳ ದಟ್ಟಣೆ - ಧಾರವಾಡ ಜಿಲ್ಲಾಸ್ಪತ್ರೆಯಲ್ಲಿ ಹೆಚ್ಚುವರಿ ವ್ಯವಸ್ಥೆಗೆ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ**

**೩. ಯಾದಗಿರಿ ಜಿಲ್ಲೆ ವಡಗೇರಾ ತಾಲೂಕಿನಲ್ಲಿ ನೀತಿ ಆಯೋಗದ ಸಂಪೂರ್ಣತಾ ಅಭಿಯಾನ**

**೪. ರಕ್ಷಣಾ ಇಲಾಖೆಯ ಹಲವು ಪಡೆಗಳಲ್ಲಿ ಮಾಜಿ ಅಗ್ನಿವೀರರ ಮರುನೇಮಕಕ್ಕೆ, ಶೇಕಡ ೧೦ರ ಮೀಸಲಾತಿ**

**<><*<><>*><>**

ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿಂದು ಸಚಿವರು ಮತ್ತು ಅಧಿಕಾರಿಗಳ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ರಾಜ್ಯದಲ್ಲಿ ವಾಡಿಕೆಯ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದರೂ ಸಹ ಇದುವರೆಗೆ ಜಲಾಶಯಗಳಿಗೆ ಶೇಕಡ ೨೮ ರಷ್ಟು ಒಳಹರಿವಿನ ಕೊರತೆಯಿದೆ. ಇದನ್ನು ಕಾವೇರಿ ಸಮಿತಿಗೆ ತಿಳಿಸಲಾಗಿತ್ತು. ಈ ತಿಂಗಳ ಅಂತ್ಯದವರೆಗೂ ಯಾವುದೇ ಆದೇಶ ನೀಡಬಾರದು ಎಂದು ಮನವಿ ಮಾಡಲಾಗಿತ್ತು. ಆದರೂ, ಇಂದಿನಿಂದ ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ನೀರು ಬಿಡುಗಡೆ ಮಾಡುವಂತೆ ಸಮಿತಿ ಸೂಚಿಸಿದೆ. ಇದನ್ನು ಪ್ರಶ್ನಿಸಿ ಕಾವೇರಿ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಬೇಕು ಎಂದು ಇಂದು ನಡೆದ ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ ಎಂದು ಹೇಳಿದರು. ಈ ತಿಂಗಳ ೧೪ ರಂದು ಭಾನುವಾರ ಸಂಜೆ ೪ ಗಂಟೆಗೆ ಸರ್ವಪಕ್ಷ ಸಭೆ ನಡೆಸಲು ತೀರ್ಮಾನಿಸಲಾಗಿದೆ. ರಾಜ್ಯದ ನೀರಿನ ವಿಚಾರದಲ್ಲಿ ಎಲ್ಲ ಪಕ್ಷಗಳೂ ಸಹಮತ ಹೊಂದಿವೆ. ಕೇಂದ್ರ ಸಚಿವರು, ಕಾವೇರಿ ಭಾಗದ ಸಂಸದರು ಮತ್ತು ಶಾಸಕರನ್ನು ಸಭೆಗೆ ಆಹ್ವಾನಿಸಲಾಗುವುದು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸರ್ಕಾರ ಮುಂದಿನ ತೀರ್ಮಾನ ಮಾಡಲಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ಬಿಳಿಗುಂಡ್ಲುವಿನಲ್ಲಿ ಅಳತೆ ಮಾಡುವಾಗ ಕಬಿನಿ ಅಣೆಕಟ್ಟೆಯ ಒಳಹರಿವಿನಷ್ಟು ಪ್ರಮಾಣದಷ್ಟು ನೀರನ್ನು ಈಗ ತಮಿಳುನಾಡಿಗೆ ಹರಿಸಲಾಗುತ್ತಿದೆ. ಕಾವೇರಿ ಜಲಾನಯನ ಪ್ರದೇಶದ ಎಲ್ಲಾ ನಾಲ್ಕು ಜಲಾಶಗಳು ಸೇರಿದಂತೆ ಒಟ್ಟು ಕೇವಲ ೬೦ ಟಿಎಂಸಿ ನೀರು ಲಭ್ಯವಿದೆ. ರಾಜ್ಯದ ಕೃಷಿ ಚಟುವಟಿಕೆಗೂ ನೀರಿನ ಅಗತ್ಯವಿದೆ. ಮಳೆಕೊರತೆಯನ್ನು ಗಮನದಲ್ಲಿರಿಸಿಕೊಂಡು ಜುಲೈ ಅಂತ್ಯದವರೆಗೆ ಕಾಲಾವಕಾಶಕ್ಕೆ ಮನವಿ ಮಾಡಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

**<><*<><>*><>**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಮುಖ್ಯಮಂತ್ರಿ ಸತ್ಯಾಂಶವನ್ನು ಮರೆಮಾಚಲು ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬಿಡದಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೂಡಾ ಹಗರಣವನ್ನು ಸಿಬಿಐ ತನಿಖೆಗೆ ಒಳಪಡಿಸಬೇಕು. ಹಗರಣದಿಂದ ಅನ್ಯಾಯವಾಗಿರುವ ಬಡವರಿಗೆ ನ್ಯಾಯ ದೊರೆಯಬೇಕು. ಮುಖ್ಯಮಂತ್ರಿ ಹಗರಣದ ಹಿನ್ನೆಲೆಯಲ್ಲಿ ರಾಜೀನಾಮೆ ಕೊಡಬೇಕು ಎಂದು ಬಿಜೆಪಿ ಆಗ್ರಹಿಸುತ್ತದೆ. ವಿಧಾನಮಂಡಲ ಕಲಾಪದಲ್ಲೂ ಬಿಜೆಪಿ ಈ ಕುರಿತು ಪ್ರಸ್ತಾಪಿಸಲಿದೆ ಎಂದು ಬಿ.ವೈ.ವಿಜಯೇಂದ್ರ ಹೇಳಿದರು. ಮೂಡಾ ಹಗರಣವನ್ನು ಖಂಡಿಸಿ ಬಿಜೆಪಿ ಕಾರ್ಯಕರ್ತರು ಇಂದು ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದರು. ಈ ನಡುವೆ, ಮೂಡಾ ವಿಚಾರದಲ್ಲಿ ಬಿಜೆಪಿ, ರಾಜಕೀಯ ಮಾಡುತ್ತಿದೆ. ಈ ಆರೋಪದಲ್ಲಿ ಹುರುಳಿಲ್ಲ. ಬಿಜೆಪಿ ಆರೋಪಕ್ಕೆ ಸೂಕ್ತ ಕಾಲದಲ್ಲಿ ಉತ್ತರಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ.

**<><*<><>*><>**

ಬೆಳಗಾವಿ ಜಿಲ್ಲೆ ಚಿಕ್ಕೋಡಿಯಲ್ಲಿ ನಿರ್ಮಿಸಲಾಗಿರುವ ತಾಯಿ, ಮಕ್ಕಳ ಆಸ್ಪತ್ರೆ ಲೋಕಾರ್ಪಣೆಗೆ ಸಜ್ಜಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಬೆಳಗಾವಿಯ ಸುವರ್ಣಸೌಧದಲ್ಲಿಂದು ನಡೆದ ಪ್ರಸಕ್ತ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಮೊದಲ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವರು ಮಾತನಾಡಿ, ಚಿಕ್ಕೋಡಿಯಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, ವೈದ್ಯಕೀಯ ಸಿಬ್ಬಂದಿ ನೇಮಕವಾಗಿದೆ. ಆಗಸ್ಟ್

೧೫ ರಂದು ಆಸ್ಪತ್ರೆಯ ಲೋಕಾರ್ಪಣೆಗೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಹೇಳಿದರು. ಸಾರ್ವಜನಿಕರಿಗೆ ಉತ್ತಮ ವೈದ್ಯಕೀಯ ಸೌಲಭ್ಯ ಒದಗಿಸಲು ಅನುಕೂಲವಾಗುವಂತೆ ಬೆಳಗಾವಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಯಂತ್ರೋಪಕರಣಗಳ ಬಳಕೆಯನ್ನು ಕೂಡಲೇ ಆರಂಭಿಸಬೇಕು ಎಂದು ಅವರು ಸೂಚಿಸಿದರು. ಜಿಲ್ಲೆಯಲ್ಲಿ ಡೆಂಘೀ ಜ್ವರದ ನಿಯಂತ್ರಣಕ್ಕೆ ತುರ್ತು ಗಮನ ಹರಿಸಬೇಕು. ಜಿಲ್ಲೆಯ ಎಲ್ಲ ಆಸ್ಪತ್ರೆಗಳಿಗೂ ಡೆಂಘೀ ಪರೀಕ್ಷೆ ಕಿಟ್‌ಗಳನ್ನು ವಿತರಿಸಬೇಕು. ಡೆಂಘೀ ಸೋಂಕಿತರಿಗೆ ತ್ವರಿತ ಚಿಕಿತ್ಸೆ ನೀಡಬೇಕು ಎಂದು ಸತೀಶ್ ಜಾರಕಿಹೊಳಿ ನಿರ್ದೇಶಿಸಿದರು.

**<><*<><>*><>**

ಧಾರವಾಡ ಜಿಲ್ಲಾಸ್ಪತ್ರೆಯಲ್ಲಿ ಸ್ವಚ್ಛತೆಯ ಪಾಲನೆ, ವಾರ್ಡ್‌ಗಳಿಗೆ ವೈದ್ಯರ ನಿಗದಿತ ಭೇಟಿ, ರೋಗಿಗಳಿಗೆ ಸಕಾಲಿಕ ಚಿಕಿತ್ಸೆ ಮತ್ತು ಔಷಧಿಗಳ ಲಭ್ಯತೆಯ ಬಗ್ಗೆ ಖಾತರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಆದೇಶಿಸಿದ್ದಾರೆ. ಇಂದು ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು, ವ್ಯವಸ್ಥೆಗಳನ್ನು ಪರಿಶೀಲಿಸಿದರು. ಧಾರವಾಡ ಜಿಲ್ಲಾಸ್ಪತ್ರೆಗೆ ಉತ್ತರಕನ್ನಡ, ಬೆಳಗಾವಿ, ಗದಗ್, ಬಾಗಲಕೋಟೆ, ಹಾವೇರಿ ಜಿಲ್ಲೆಗಳಿಂದಲೂ ರೋಗಿಗಳು ಚಿಕಿತ್ಸೆಗಾಗಿ ಬರುತ್ತಾರೆ. ಹೊರ ಜಿಲ್ಲೆಗಳ ರೋಗಿಗಳ ನಿರ್ವಹಣೆಗಾಗಿ ಸರ್ಕಾರದ ಅನುದಾನದೊಂದಿಗೆ ವಿವಿಧ ಕೈಗಾರಿಕೆಗಳ ಸಿ.ಎಸ್.ಆರ್ ನಿಧಿಯನ್ನು ಬಳಸಿಕೊಂಡು, ಹೆಚ್ಚುವರಿ ಸೌಲಭ್ಯ ಕಲ್ಪಿಸಬೇಕು ಎಂದು ಅವರು ಸೂಚಿಸಿದರು. ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಧಾರವಾಡ ಜಿಲ್ಲಾಸ್ಪತ್ರೆಗೆ ಪ್ರತಿ ದಿನ ಅಂದಾಜು ಒಂದೂವರೆ ಸಾವಿರ ಹೊರ ರೋಗಿಗಳು ನೋಂದಣಿಯಾಗುತ್ತಾರೆ. ತಿಂಗಳಿಗೆ ಸರಾಸರಿ ೨೮ ಸಾವಿರ ರೋಗಿಗಳು ಚಿಕಿತ್ಸೆ ಪಡೆಯುತ್ತಾರೆ ಎಂದು ಮಾಹಿತಿ ನೀಡಿದರು.

**<><*<><>*><>**

ದೇಶಾದ್ಯಂತ ಎಚ್.ಎಂ.ಟಿ ಭೂಮಿ ಒತ್ತುವರಿ ತೆರವಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆಯ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಹೈದರಾಬಾದ್‌ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು, ಹರಿಯಾಣದ ಪಿಂಜೋರ್‌ನಲ್ಲಿರು ಎಚ್.ಎಂ.ಟಿ ಘಟಕಗಳಿಗೆ ಇತ್ತೀಚೆಗೆ ಭೇಟಿ ನೀಡಿ ಪರಿಶೀಲಿಸಲಾಗಿದೆ. ಈ ಎರಡೂ ಘಟಕಗಳು ಒಂದೇ ಮಾದರಿಯ ಸಂಕಷ್ಟವನ್ನು ಎದುರಿಸುತ್ತಿವೆ. ಎಚ್.ಎಂ.ಟಿ ಕಂಪನಿಗೆ ಇರುವ ದೊಡ್ಡ ಪ್ರಮಾಣದ ಜಮೀನಿಗೆ ಅಕ್ರಮ ಒತ್ತುವರಿಯ ಸಮಸ್ಯೆಯಾಗಿದೆ. ಒತ್ತುವರಿ ಜಮೀನನ್ನು ಕಾನೂನು ಕ್ರಮದ ಮೂಲಕ ಸಂಸ್ಥೆಗೆ ವಾಪಸ್ ಪಡೆಯಲಾಗುವುದು ಎಂದು ತಿಳಿಸಿದರು.

**<><*<><>*><>**

ಕೇಂದ್ರ ಸರ್ಕಾರದ ನೀತಿ ಆಯೋಗದ ಮಹತ್ವಾಕಾಂಕ್ಷಿ ತಾಲೂಕು ಯೋಜನೆಯಡಿ ಗುರುತಿಸಲಾಗಿರುವ ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕನ್ನು ಸಂಪೂರ್ಣತಾ ಅಭಿಯಾನದಡಿ ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾಕ್ಟರ್ ಬಿ.ಸುಶೀಲಾ ತಿಳಿಸಿದ್ದಾರೆ. ೨೦೧೭ ರಲ್ಲಿ ಹೊಸ ತಾಲೂಕಾಗಿ ರೂಪಿಸಲಾಗಿರುವ ವಡಗೇರಾವನ್ನು ಕಳೆದ ವರ್ಷ ಮಹತ್ವಾಕಾಂಕ್ಷಿ ತಾಲೂಕು ಎಂದು ಗುರುತಿಸಲಾಗಿದೆ. ಈ ತಾಲೂಕಿನಲ್ಲಿ  ಶಿಕ್ಷಣ, ಆರೋಗ್ಯ ಮತ್ತು ಮಕ್ಕಳು ಹಾಗೂ ಮಹಿಳೆಯರ ಅಭಿವೃದ್ಧಿ ಇಲಾಖೆಗಳಿಗೆ ಸಂಬಂಧಿಸಿದಂತೆ ಮುಖ್ಯ ಸೂಚ್ಯಾಂಕಗಳಲ್ಲಿ ಶೇಕಡ ನೂರರಷ್ಟು ಅಭಿವೃದ್ಧಿ ಸಾಧಿಸುವ ಉದ್ದೇಶವನ್ನು ಕೇಂದ್ರ ಸರ್ಕಾರ ಹೊಂದಿದೆ. ಈ ತಿಂಗಳ ನಾಲ್ಕರಿಂದ ಈ ಅಭಿಯಾನ ಆರಂಭವಾಗಿದ್ದು, ಸೆಪ್ಟಂಬರ್ ತಿಂಗಳ ಒಳಗೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಸೂಚ್ಯಂಕಗಳಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸುವ ಉದ್ದೇಶವಿದೆ. ಗರ್ಭಿಣಿಯರ ನೋಂದಣಿ, ಗರ್ಭಿಣಿಯರಿಗೆ ಪೂರಕ ಪೋಷಕಾಂಶಗಳ ನೀಡಿಕೆ, ೩೦ ವರ್ಷ ಮೇಲ್ಪಟ್ಟ ಜನರಿಗೆ ಡಯಾಬಿಟೀಸ್, ಬಿಪಿಯಂತಹ ಕಾಯಿಲೆ ತಪಾಸಣೆ, ರೈತರಿಗೆ ಮಣ್ಣು ಆರೋಗ್ಯ ಕಾರ್ಡ್‌ಗಳ ವಿತರಣೆ, ಸ್ವ-ಸಹಾಯ ಗುಂಪುಗಳಿಗೆ ಸುತ್ತಿನ ನಿಧಿಗೆ ಅರ್ಹತೆ ನೀಡುವ ಅಂಶಗಳಲ್ಲಿ ಪ್ರಗತಿ ಸಾಧಿಸಲು ಉದ್ದೇಶಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಈಗಾಗಲೇ ಯಾದಗಿರಿ ಜಿಲ್ಲೆಯಲ್ಲಿ ಈಗ ಹೇಳಿದ ಸೂಚ್ಯಂಕಗಳ ಪೈಕಿ ನಾಲ್ಕರಲ್ಲಿ ಶೇಕಡ ೯೮ ರಷ್ಟು ಪ್ರಗತಿ ಸಾಧಿಸಲಾಗಿದೆ. ವಡಗೇರಾ ತಾಲೂಕಿನ ೧೭ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಮುಂದಿನ ಮೂರು ತಿಂಗಳಲ್ಲಿ ಪ್ರತಿ ವಾರ ವಿವಿಧ ಚಟುವಟಿಕೆಗಳನ್ನು ಕೈಗೊಂಡು ಕೇಂದ್ರ ಸರ್ಕಾರದ ಗುರಿ ತಲುಪಲಾಗುವುದೇ ಈ ಸಂಪೂರ್ಣತಾ ಅಭಿಯಾನದ ಮುಖ್ಯ ಉದ್ದೇಶವಾಗಿದ  ಎಂದು ಡಾಕ್ಟರ್ ಬಿ.ಸುಶೀಲಾ ತಿಳಿಸಿದ್ದಾಗಿ ನಮ್ಮ ಜಿಲ್ಲಾ ಪ್ರತಿನಿಧಿ ವರದಿ ಮಾಡಿದ್ದಾರೆ.

**<><*<><>*><>**

ಗಡಿ ಭದ್ರತಾ ಪಡೆ ಮತ್ತು ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಯಲ್ಲಿ ಮಾಜಿ ಅಗ್ನಿವೀರರ ಮರುನೇಮಕಕ್ಕೆ ಶೇಕಡ ೧೦ರಷ್ಟು ಮೀಸಲಾತಿ ಕಲ್ಪಿಸಲು ಕೇಂದ್ರ ಗೃಹ ಸಚಿವಾಲಯ ನಿರ್ಧರಿಸಿದೆ. ಈ ನೇಮಕದ ವೇಳೆ ಅಗ್ನಿವೀರರಿಗೆ ದೈಹಿಕ ಪರೀಕ್ಷೆ ಮತ್ತು ವಯೋಮಿತಿಯಲ್ಲೂ ವಿನಾಯಿತಿ ಇರಲಿದೆ ಎಂದು ಗಡಿ ಭದ್ರತಾಪಡೆ, ಕೇಂದ್ರ ಮೀಸಲು ಪೊಲೀಸ್ ಪಡೆ, ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ ಮತ್ತು ಸಶಸ್ತ್ರ ಸೀಮಾಬಲ ಪಡೆಗಳ ಮುಖ್ಯಸ್ಥರು ತಿಳಿಸಿದ್ದಾರೆ. ಈ ಕುರಿತು ಮಾತನಾಡಿದ, ಸಿಐಎಸ್‌ಎಫ್‌ನ ಮಹಾನಿರ್ದೇಶಕರಾದ ನಿನಾ ಸಿಂಗ್, ಮಾಜಿ ಅಗ್ನಿವೀರರನ್ನು ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗೆ ನೇಮಕ ಮಾಡಿಕೊಳ್ಳುವ ಕುರಿತಂತೆ ಗೃಹ ಸಚಿವಾಲಯ ಪ್ರಮುಖ ಹೆಜ್ಜೆಯನ್ನಿಟ್ಟಿದೆ. ಈ ಕುರಿತಂತೆ ಸಕಲ ಸಿದ್ಧತೆಯನ್ನು

ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಕೇಂದ್ರೀಯ ಮೀಸಲು ಪೊಲೀಸ್ ಪಡೆ - ಸಿಆರ್‌ಪಿಎಫ್‌ನಲ್ಲಿ ಅಗ್ನಿವೀರರಾಗಿ ಸೇವೆ ಸಲ್ಲಿಸಿರುವ ಯುವಕರನ್ನು ನೇಮಕ ಮಾಡಿಕೊಳ್ಳಲು ವ್ಯವಸ್ಥೆಯಾಗಿದೆ. ಇದಕ್ಕೆ ತಕ್ಕಂತೆ ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ಅಗ್ನಿವೀರರಾಗಿ ಕಾರ್ಯ ನಿರ್ವಹಿಸಿದ ಯುವಕರಿಗೆ ಸಿಆರ್‌ಪಿಎಫ್‌ನಲ್ಲಿ ಶೇಕಡ ೧೦ರಷ್ಟು ಮೀಸಲಾತಿ ಕಲ್ಪಿಸಲಾಗುವುದು ಎಂದು ಸಿಆರ್‌ಪಿಎಫ್ ಮಹಾನಿರ್ದೇಶಕರಾದ ಅನೀಶ್ ದಯಾಳ್ ಸಿಂಗ್ ತಿಳಿಸಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿ

೧. ಪ್ರತಿ ವರ್ಷ ಜೂನ್ ತಿಂಗಳ ೨೫ ತಾರೀಖನ್ನು ಸಂವಿಧಾನ ಹತ್ಯೆ ದಿನವೆಂದು ಆಚರಿಸಲು ಕೇಂದ್ರಸರ್ಕಾರ ನಿರ್ಧರಿಸಿದೆ. ೧೯೭೫ರ ಇದೇ ದಿನದಂದು ಅಂದಿನ ಪ್ರಧಾನಿ ಇಂದಿರಾ ಗಾಂಧಿ ದೇಶದಲ್ಲಿ ತುರ್ತುಪರಿಸ್ಥಿತಿಯನ್ನು ಘೋಷಿಸಿದ್ದರು. ತುರ್ತುಪರಿಸ್ಥಿತಿಯ ಕರಾಳ ನೆನಪಿಗಾಗಿ ಸಂವಿಧಾನ ಹತ್ಯೆ ದಿನವನ್ನು ಆಚರಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

೨. ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಪ್ರತಿ ಜಿಲ್ಲೆಯಲ್ಲಿಯೂ ನಾಳೆ ರಾಷ್ಟ್ರೀಯ ಲೋಕ ಅದಾಲತ್ ನಡೆಸಲಾಗುತ್ತಿದ್ದು, ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿ ಇರುವ ಪ್ರಕರಣಗಳು ಹಾಗೂ ಇನ್ನೂ ನ್ಯಾಯಾಲಯವನ್ನು ಪ್ರವೇಶಿಸದೇ ಇರುವ ಪ್ರಕರಣಗಳನ್ನು ಸಹ ನೇರವಾಗಿ ಹಾಗೂ ಶೀಘ್ರವಾಗಿ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ, ಸಾರ್ವಜನಿಕರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಬಿ.ಗೀತಾ ತಿಳಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಾಮಾನ

ಕರಾವಳಿಯಲ್ಲಿ ನೈಋತ್ಯ ಮುಂಗಾರು ಸಾಧಾರಣವಾಗಿದ್ದು, ಒಳನಾಡಿನಲ್ಲಿ ದುರ್ಬಲವಾಗಿದೆ. ಕುಂದಾಪುರದಲ್ಲಿ ೮ ಸೆಂಟಿಮೀಟರ್, ಕೋಟಾ, ಸಿದ್ದಾಪುರ ತಲಾ ೫, ಮಂಗಳೂರು ವಿಮಾನ ನಿಲ್ದಾಣದಲ್ಲಿ ೪, ಹೊನ್ನಾರ, ಆಗುಂಬೆ, ಕಮ್ಮರಡಿಯಲ್ಲಿ ತಲಾ ೩ ಸೆಂಟಿಮೀಟರ್ ಮಳೆಯಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಜೋರು ಗಾಳಿ ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನ ಹಲವೆಡೆ ಭಾರೀ ಮಳೆಯಾಗುತ್ತಿದೆ. ಗರಿಷ್ಟ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**